ಆ) ನವಣೂರ ಬಸ್ ಘಟಕದಿಂದ ಇನ್ನೂ ಅನೇಕ ಹೊಸ ಅನುಸೂಚಿಗಳನ್ನು ಕಾರ್ಯಾಚರಣೆಗೆ ತರಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುತ್ತದೆ?

ಶ್ರೀ ಚಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಹೌದು

ಈ ಘಟಕದಲ್ಲಿ 8 ವಾಹನಗಳು ಮಾತ್ರ 8 ಲಕ್ಷ ಕಿ ಮೀಗಳು ಕ್ರಮಿಸಿದ್ದು, ಎಲ್ಲಾ ವಾಹನಗಳು ಸುಸ್ಥಿತಿಯಲ್ಲಿರುತ್ತದೆ

ಆ) 2006–07ನೇ ಮತ್ತು 2007–08 ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ನವಣೂರ ಘಟಕದಿಂದ 8 ಹೊಸ ಅನುಸೂಚಿಗಳನ್ನು ಕಾರ್ಯಾಚರಣೆಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ

444 (451) **ಶ್ರೀ ಶ್ರೀನಿವಾಸಗೌಡ ಕೆ (ಕೋಲಾರ)** ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯ ಗ್ರಾಮಾಂತರ ಪ್ರದೇಶದಲ್ಲಿ ಲೋಡ್ ಶೆಡ್ಡಿಂಗ್ ವಿದ್ಯುಚ್ಛಕ್ತಿ ಇಲ್ಲದೆ ಎಷ್ಟು ಗಂಟೆ ವಿದ್ಯುತ್ ನ್ನು ಒದಗಿಸಲಾಗುತ್ತಿದೆ,

ಆ) ಹಾಗಿದ್ದಲ್ಲಿ, ಇದುವರೆವಿಗೂ ಲೋಡ್ ಶೆಡ್ಡಿಂಗ್ ಇಲ್ಲದೆ ಎಷ್ಟು ಗಂಟೆ ಕಾಲ ವಿದ್ಯುಚ್ಛಕ್ತಿ ಕೊಡಲಾಗಿದೆ,

ಇ) ಜಿಲ್ಲೆಯಲ್ಲಿ ವಿದ್ಯುತ್ ಕೊರತೆಯಿಂದ ಬೆಳೆ ನಾಶವಾಗಿರುವುದು ನಿಜವಲ್ಲವೆ,

ಈ) ರಾಜ್ಯದ ವಿದ್ಯುಚ್ಛಕ್ತಿ ಉತ್ಪಾದನೆ ಮಾಡುವ ಎಲ್ಲಾ ನದಿಗಳು ತುಂಬಿದ್ದರೂ ಕೂಡ ದಿನಕ್ಕೆ 16 ಗಂಟೆ ವಿದ್ಯುಚ್ಛಕ್ತಿ ಒದಗಿಸದೇ ಇರಲು ಕಾರಣಗಳೇನು,

ಉ) ನಗರ ಪ್ರದೇಶ ವ್ಯಾಪ್ತಿಯಲ್ಲಿ ವಿದ್ಯುಚ್ಛಕ್ತಿ ಕೊರತೆಯನ್ನು ನೀಗಿಸಲು ಪರಿಹಾರಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮತ್ತು ಆ) ರಾಜ್ಯಾದ್ಯಂತ ಗ್ರಾಮಾಂತರ ಪ್ರದೇಶಗಳಲ್ಲಿ ಸಾಮಾನ್ಯವಾಗಿ ದಿನವಹಿ 9 ಗಂಟೆಗಳ ಅವಧಿಗೆ 3 ಫೇಸ್ ನಲ್ಲಿ 9 ಗಂಟೆಗಳ ಅವಧಿಗೆ ಸಿಂಗಲ್‌ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಬಾಕಿ

ಉಳಿದ 6 ಗಂಟೆಯ ಅವಧಿಯಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ ಆದರೆ ಕೆಲವು ಪ್ರದೇಶಗಳಲ್ಲಿ ತಾಂತ್ರಿಕ ಇತಿಮಿತಿಗಳಿಂದಾಗಿ ಸ್ವಲ್ಪ ಮಾರ್ಪಾಟುಗಳನ್ನ ಮಾಡುವುದು ಅನಿವಾರ್ಯವಾಗುತ್ತದೆ ಅಲ್ಲದೇ ಕರ್ನಾಟಕವೂ ಸಹಾ ದಕ್ಷಿಣ ರಾಜ್ಯಗಳ ವಿದ್ಯುತ್ ವ್ಯವಸ್ಥೆಯ ಒಂದು ಭಾಗವಾಗಿರುವುದರಿಂದ ಗ್ರಿಡ್ ಶಿಸ್ತನ್ನು ಕಾಪಾಡುವುದು ಬಹಳ ಅಗತ್ಯವಾಗಿರುತ್ತದೆ ಇಲ್ಲದಿದ್ದಲ್ಲಿ, ಇಡೀ ದಕ್ಷಿಣ ರಾಜ್ಯಗಳ ವಿದ್ಯುತ್ ವ್ಯವಸ್ಥೆಯೇ ಸಂಪೂರ್ಣ ಕುಸಿಯುವ ಸಂಭವವಿರುತ್ತದೆ ಗ್ರೇಡ್ ಶಿಸ್ತನ್ನು ಕಾಪಾಡುವ ಸಮಯದಲ್ಲಿ ವಿದ್ಯುತ್ ವ್ಯವಸ್ಥೆಯ ಫ್ರೀಕ್ವೆನ್ಸಿ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕಾಗಿರುವುದರಿಂದ ಫ್ರೀಕ್ವೆನ್ಸಿ ನಿಗದಿತ ಮಟ್ಟದಲ್ಲಿ ಇರುವಂತೆ ನೋಡಿಕೊಳ್ಳಲು ಕೆಲವೊಮ್ಮೆ ಅನಿವಾರ್ಯವಾಗಿ ಲೋಡ್ ಶೆಡ್ಡಿಂಗ್ ನಿರ್ವಹಿಸಬೇಕಾಗಿರುತ್ತದೆ

ಕೋಲಾರ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಸ್ವಲ್ಪ ಮಾರ್ಪಾಡುಗಳನ್ನು ಮಾಡಿಕೊಂಡು ವಿದ್ಯುತ್ ಸರಬರಾಜು ಮಾಡುವ ಫೀಡರ್ ಗಳನ್ನು ಎರಡು ಗುಂಪುಗಳಾಗಿ ವಿಂಗಡಿಸಿ ಒಂದು ಗುಂಪಿಗೆ 8 ಗಂಟೆ ಅವಧಿಗೆ 3 ಫೇಸ್ ನಲ್ಲಿ 9 ಗಂಟೆಗಳ ಅವಧಿಗೆ ಸಿಂಗಲ್ ಫೇಸ್ ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಬಾಕಿ 7 ಗಂಟೆಗಳ ಅವಧಿಗೆ ವಿದ್ಯುತ್ ಸರಬರಾಜು ಇರುವುದಿಲ್ಲ (ಲೋಡ್ ಶೆಡ್ಡಿಂಗ್ ಮಾಡಲಾಗುತ್ತದೆ) ಇನ್ನೊಂದು ಗುಂಪಿಗೆ 9 ಗಂಟೆ ಅವಧಿಗೆ 3 ಫೇಸ್ ನಲ್ಲಿ 9 ಗಂಟೆಗಳ ಅವಧಿಗೆ ಸಿಂಗಲ್ ಫೇಸ್ ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಬಾಕಿ 6 ಗಂಟೆಗಳ ಅವಧಿಗೆ ವಿದ್ಯುತ್ ಸರಬರಾಜು ಇರುವುದಿಲ್ಲ (ಲೋಡ್ ಶೆಡ್ಡಿಂಗ್ ಮಾಡಲಾಗುತ್ತದೆ) ಈ ಎರಡೂ ಗುಂಪುಗಳ ವಿದ್ಯುತ್ ಸರಬರಾಜಿನ ಸಮಯ ಮತ್ತು ಲೋಡ್ ಶೆಡ್ಡಿಂಗ್ ಅವಧಿಯನ್ನು ವಾರಕ್ಕೊಮ್ಮೆ ಅದಲು ಬದಲು ಮಾಡಲಾಗುತ್ತಿದೆ ಇದರಿಂದ ಎರಡೂ ಗುಂಪುಗಳ ನಡುವೆ ವಿದ್ಯುತ್ ಸರಬರಾಜು ಹಾಗೂ ಲೋಡ್ ಶೆಡ್ಡಿಂಗ್ ವಿಷಯಗಳಲ್ಲಿ ತಾರತಮ್ಯ ಉಂಟಾಗುವುದಿಲ್ಲ

ಇ) ರಾಜ್ಯವು ಎದುರಿಸುತ್ತಿರುವ ವಿದ್ಯುತ್ ಕೊರತೆಯ ಪರಿಸ್ಥಿತಿಯಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ನಿಯಮಿತ ಲೋಡ್ ಶೆಡ್ಡಿಂಗ್ ನಿರ್ವಹಿಸುವುದು ಅನಿವಾರ್ಯವಾಗಿರುತ್ತದೆ ಆಶ್ವಾಸಿತ ಅವಧಿಗೆ 3 ಫೇಸ್‌ನಲ್ಲಿ ವಿದ್ಯುತ್

ಸರಬರಾಜು ಒದಗಿಸಲು ಕವಿಪ್ರನಿನಿ ಮತ್ತು ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿವೆ

ಈ) ರಾಜ್ಯದ ಪ್ರಮುಖ ಜಲವಿದ್ಯುತ್ ಉತ್ಪಾದನಾ ಕೇಂದ್ರಗಳ ಜಲಾನಯನ ಪ್ರದೇಶಗಳಲ್ಲಿ ಉಂಟಾದ ಉತ್ತಮ ಮಳೆಯಿಂದಾಗಿ ಜಲಾಶಯಗಳು ತುಂಬಿದ್ದರೂ ಸಹ ರಾಜ್ಯದ ಬಹುತೇಕ ಜಿಲ್ಲೆಗಳು ಮಳೆಯ ಅಭಾವದಿಂದಾಗಿ ಬರಗಾಲಕ್ಕೆ ತುತ್ತಾಗಿವೆ ಈ ಕಾರಣದಿಂದ ನೀರಾವರಿ ಪಂಪು ಸೆಟ್ಟುಗಳಿಂದ ವಿದ್ಯುತ್ ಬೇಡಿಕೆ ಹೆಚ್ಚಾಗಿ, ಕಳೆದ ವರ್ಷವಾದ 2005–06ಕ್ಕೆ ಹೋಲಿಸಿದಲ್ಲಿ ಪ್ರಸಕ್ತ ವರ್ಷದಲ್ಲಿನ ವಿದ್ಯುತ್ ಬೇಡಿಕೆ ಹೆಚ್ಚಾಗಿರುತ್ತದೆ ಕಳೆದ ವರ್ಷವಾದ 2005–06ರಲ್ಲಿ ಏಪ್ರಿಲ್ –05 ರಿಂದ ಜನವರಿ 06 ರವರೆಗಿನ ಅವಧಿಯಲ್ಲಿ ಬಳಕೆಯಾದ ವಿದ್ಯುತ್ತಿನ ಪ್ರಮಾಣ 27,424 ದಶಲಕ್ಷ ಯೂನಿಟ್ಟುಗಳು, ಆದರೆ ಪ್ರಸಕ್ತ ವರ್ಷದಲ್ಲಿ ಏಪ್ರಿಲ್–06 ರಿಂದ ಜನವರಿ–07ರವರೆಗಿನ ಅವಧಿಯಲ್ಲಿ ಪೂರೈಕೆ ಮಾಡಲಾದ ವಿದ್ಯುತ್ತಿನ ಪ್ರಮಾಣ 32 692 ದಶಲಕ್ಷ ಯೂನಿಟ್ಟುಗಳು 5267 ದಶಲಕ್ಷ ಯೂನಿಟ್ಟುಗಳಷ್ಟು (ಶೇ 19 ರಷ್ಟು) ವಿದ್ಯುತ್ ನ್ನು ಪ್ರಸಕ್ತ ವರ್ಷದಲ್ಲಿ ಹೆಚ್ಚುವರಿಯಾಗಿ ಸರಬರಾಜು ಮಾಡಲಾಗಿರುತ್ತದೆ ಜಲಾಶಯಗಳು ತುಂಬಿದ ಪರಿಣಾಮ ಜಲ ವಿದ್ಯುತ್ ಲಭ್ಯತೆ ಅಧಿಕಗೊಂಡಿದ್ದರಿಂದ ಮುಂಗಾರು ವಿಫಲಗೊಂಡ ತಿಂಗಳುಗಳಾದ ಜುಲೈ, ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ –06 ತಿಂಗಳುಗಳಲ್ಲಿ ರೈತರ ಹಿತದೃಷ್ಟಿಯಿಂದ ಲೋಡ್ ಶೆಡ್ಡಿಂಗ್ ನಿರ್ವಹಿಸದೆಯೇ ನೀರಾವರಿ ಪಂಪುಸೆಟ್ಟುಗಳ ಹೆಚ್ಚುವರಿ ವಿದ್ಯುತ್ ಬೇಡಿಕೆಯನ್ನು ಪೂರೈಕೆ ಮಾಡಲಾಯಿತು ಆದರೆ ಈಗ ಬೇಸಿಗೆ ಪ್ರಾರಂಭವಾಗುತ್ತಿದ್ದು, ಮುಂದಿನ ತಿಂಗಳುಗಳಲ್ಲಿ ವಿದ್ಯುತ್ ಬೇಡಿಕೆ ಮತ್ತಷ್ಟು ಹೆಚ್ಚಳಗೊಳ್ಳುವುದರಿಂದ ವಿದ್ಯುತ್ ಲಭ್ಯತೆ ಮತ್ತು ಬೇಡಿಕೆಯ ನಡುವೆ ಸಮತೋಲನವನ್ನು ಕಾಯ್ದುಕೊಳ್ಳಲು ಗ್ರಾಮಾಂತರ ಪ್ರದೇಶಗಳಲ್ಲಿ ನಿಯಮಿತ ಲೋಡ್ ಶೆಡ್ಡಿಂಗ್ ನಿರ್ವಹಿಸಬೇಕಾಗಿರುತ್ತದೆ

ಉ) ನಗರ ಪ್ರದೇಶಗಳಲ್ಲಿ ಲೋಡ್ ಶೆಡ್ಡಿಂಗ್ ನ್ನು ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಮಾಡಲಾಗುತ್ತದೆ ನಗರ ಪ್ರದೇಶಗಳಲ್ಲಿ ದಿನವಹಿ 24 ಗಂಟೆಗಳ ನಿರಂತರ ವಿದ್ಯುತ್ ಸರಬರಾಜಿನ ವ್ಯವಸ್ಥೆಗೆ ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಕವಿಪ್ರನಿನಿ ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ಆರ್ಥಿಕ ಹಿತ ದೃಷ್ಟಿಯಿಂದ ಇದು ಅಗತ್ಯವೂ ಆಗಿದೆ ಕವಿಪ್ರನಿನಿ ಮತ್ತು ವಿದ್ಯುತ್

ಸರಬರಾಜು ಕಂಪನಿಗಳು ನಗರ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನ ಸುಧಾರಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ

1) ಹೊಸ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆ

2) ಹಾಲಿ ಇರುವ ವಿದ್ಯುತ್ ಉವಕೇಂದ್ರಗಳ ಬಲವರ್ಧನೆ

3) ವಿತರಣಾ ವ್ಯವಸ್ಥೆಯ ಬಲಪಡಿಸುವಿಕೆ

4) ವಿದ್ಯುತ್ ಪ್ರಸರಣಾ ಮಾರ್ಗಗಳ ಬಲವಡಿಸುವಿಕೆ ಮತ್ತು ಹೊಸ ವಿದ್ಯುತ್ ಪ್ರಸರಣಾ ಮಾರ್ಗಗಳ ನಿರ್ಮಾಣ

5) ವಿತರಣಾ ವ್ಯವಸ್ಥೆಯಲ್ಲಿ ಹೆಚ್ಚುವರಿ ವಿತರಣಾ ಟ್ರಾನ್ಸ್ ಫಾರ್ಮರ್ ಗಳ ಅಳವಡಿಕೆ

ವಿದ್ಯುತ್ ಕೊರತೆ ರಾಜ್ಯ ವ್ಯಾಪ್ತಿ ವಿಷಯವಾಗಿರುವುದರಿಂದ, ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೆಚ್ಚಳಗೊಳಿಸುವುದು ವಿದ್ಯುತ್ ಕೊರತೆಯ ನಿವಾರಣೆಗೆ ಪ್ರಮುಖ ಪರಿಹಾರವಾಗಿದೆ ಆದುದರಿಂದ ಮುಂದಿನ 3 ರಿಂದ 4 ವರ್ಷಗಳ ಅವಧಿಯಲ್ಲಿ ಸುಮಾರು 3000 ಮೆಗಾವಾಟ್‌ನಷ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚುವರಿಯಾಗಿ ವಿದ್ಯುತ್ ವ್ಯವಸ್ಥೆಗೆ ಸೇರ್ಪಡೆಗೊಳಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದ್ದು, ಇದು ಸಾಕಾರಗೊಂಡಲ್ಲಿ ನಗರ ಪ್ರದೇಶಗಳು ಸೇರಿದಂತೆ ರಾಜ್ಯದಲ್ಲಿ ವಿದ್ಯುತ್ ಕೊರತೆ ಕಡಿಮೆಯಾಗುವ ಆಶಾಭಾವನೆಯನ್ನು ಹೊಂದಲಾಗಿದೆ

445 (345) **ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ)** ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇವಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿ ಹಾಗೂ ಗೌರಿಬಿದನೂರು ತಾಲ್ಲೂಕು ಗುಂಡ್ಲು ಕೊತ್ತೂರಿನ ಬಳಿ ನೂತನ ವಿದ್ಯುತ್ ಸಬ್‌ಸ್ಟೇಷನ್ ಗಳನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮತ್ತು ಆ) ಬಾಗೇವಲ್ಲಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿಯ ಸಮೀಪದಲ್ಲಿರುವ ಪೆರೆಸಂದ್ರ